**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಾ. ಎಂ. ಜಿ ಮುಳೆ ರವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಉತ್ತರ:**

**ಪ್ರಶ್ನೆ:** "ಸರ್ಕಾರ ಬಸವಕಲ್ಯಾಣದ ಸಮಗ್ರ ಅಭಿವೃದ್ಧಿಗಾಗಿ ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯನ್ನು ರಚಿಸಿದ್ದರೂ ಕಾಲಕ್ರಮೇಣ ಅನುದಾನ ಕೊರತೆಯಿಂದ ಕೈಗೊಂಡ ನೂರಾರು ಕಾಮಗಾರಿ ಯೋಜನೆಗಳು ಕುಂಟುತ್ತಾ ಸಾಗಿದ್ದು, ಪರಿಣಾಮ ಇತಿಹಾಸ ಪ್ರಸಿದ್ಧ ಸ್ಮಾರಕಗಳು, ಚಾಲುಕ್ಯರ ಕೋಟೆಗಳು ಶಿಥಿಲಾವ್ಯಸ್ಥೆಗೆ ತಲುಪುತ್ತಿವೆ. ಅಲ್ಲದೆ ಶರಣರ ವಚನಗಳು ಡಿಜಿಟಲ್ ಫಲಕಗಳಲ್ಲಿ ಅಳವಡಿಸುವುದು. ಬಸವ ವನ, ಬಸವ ಉದ್ಯಾನವನಗಳ ಅಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವ ವಿಚಾರದ ಬಗ್ಗೆ".

**ಸರ್ಕಾರದ ಉತ್ತರ**

ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ 2005 ರನ್ವಯ ಬೀದರ್ ಜಿಲ್ಲೆಯ ಬಸವಕಲ್ಯಾಣ ಪಟ್ಟಣದಲ್ಲಿನ ಮತ್ತು ಅದರ ಸುತ್ತಮುತ್ತಲಿನ ಪರಂಪರೆಯ ತಾಣಗಳನ್ನು ಅಂತರಾಷ್ಟ್ರೀಯ ಯಾತ್ರಾ ಸ್ಥಳವಾಗಿ ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವಾಗಿ ಅಭಿವೃದ್ಧಿಗೊಳಿಸಲು ಮತ್ತು ಅದನ್ನು ನಿರ್ವಹಿಸಲು ಸ್ಥಾಪಿತವಾದ ಮಂಡಳಿಯಾಗಿರುತ್ತದೆ.

ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯ ವತಿಯಿಂದ ಶರಣ ಶರಣೆಯರ ಒಟ್ಟು 29 ಸ್ಮಾರಕ/ತಾಣಗಳನ್ನು ಅಭಿವೃದ್ಧಿಗೊಳಿಸಿ ಸಂರಕ್ಷಣೆ ಮಾಡಲಾಗುತ್ತಿದೆ.ಈ ನಿಟ್ಟಿನಲ್ಲಿ 2005 ರಿಂದ ಇಲ್ಲಿಯವರೆಗೆ ಸುಮಾರು 17 ಸ್ಮಾರಕಗಳ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿರುತ್ತದೆ ಹಾಗೂ ಉಳಿದ ಸ್ಮಾರಕಗಳನ್ನು ಅನುದಾನದ ಲಭ್ಯತೆಯಂತೆ ಹಂತ-ಹಂತವಾಗಿ ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುತ್ತಿದೆ ಹಾಗೂ ಪರುಷಕಟ್ಟೆ ಸೇರಿದಂತೆ ನೂತನ ಅನುಭವ ಮಂಟಪ ನಿರ್ಮಾಣ ಯೋಜನೆಯ ಪರಿಷ್ಕೃತ ಮೊತ್ತ ರೂ 742. 00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ ಹಾಗೂ ಇಲ್ಲಿಯವರೆಗೆ ನೂತನ ಅನುಭವ ಮಂಟಪದ ಕಾಮಗಾರಿಗೆ ರೂ.375.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ನೂತನ ಅನುಭವ ಮಂಟಪದ ಕಾಮಗಾರಿಯು ಪ್ರಗತಿಯಲ್ಲಿದ್ದು, ಶರಣರ ವಚನಗಳನ್ನು ಸಂಗ್ರಹಣೆ ಮಾಡುವ ಕೆಲಸ ಪೂರ್ಣಗೊಳಿಸಲಾಗಿದ್ದು, ಅವುಗಳನ್ನು ಧ್ವನಿ ಮತ್ತು ದೃಶ್ಯ ಮಾಧ್ಯಮಗಳ ಮೂಲಕ ನೂತನ ಅನುಭವ ಮಂಟಪದ ಒಳಾಂಗಣದಲ್ಲಿ ಅಳವಡಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು, ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಒಳಪಡುವ ಚಾಲುಕ್ಯರ ಹಳೆಯ ಕೋಟೆಯಲ್ಲಿ ಕೋಟೆಯ ಇತಿಹಾಸವನ್ನು ಲೈಟು ಮತ್ತು ಲೇಸರ್ ಶೋ ಮೂಲಕ ಜನರಿಗೆ ತಿಳಿಸಲಾಗುತ್ತಿದೆ ಹಾಗೂ ಬಸವ ವನದ ಉದ್ಯಾನವನಕ್ಕೆ ತಡೆಗೋಡೆಯನ್ನು ನಿರ್ಮಿಸಲಾಗಿರುತ್ತದೆ.

ಬಸವಕಲ್ಯಾಣ ಅಭಿವೃದ್ಧಿ ಮಂಡಳಿಗೆ 2025-26ನೇ ಸಾಲಿನ ಆಯವಯ್ಯದಲ್ಲಿ ಸಹಾಯಾನುದಾನ- ಸಾಮಾನ್ಯ ರಡಿ ಒದಗಿಸಿರುವ ಅನುದಾನದಲ್ಲಿ ಬಸವ ತತ್ವ ಪ್ರಸಾರ ಹಾಗೂ ಸ್ಮಾರಕಗಳ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಹಂತ-ಹಂತವಾಗಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

**ಕಡತ ಸಂಖ್ಯೆ: ಕಂಇ 279 ಆರ್ ಬಿಎ 2025**

**(ಕೃಷ್ಣ ಬೈರೆಗೌಡ)**
**ಕಂದಾಯ ಸಚಿವರು**